**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 14ನೇ ಹಣಕಾಸು ಆಯೋಗದಡಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಅನುದಾನವನ್ನು ಬಳಸಿಕೊಳ್ಳಲು ವಿಧಿಸಿರುವ ಷರತ್ತುಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 10 ಗ್ರಾಪಸ 2015, ದಿನಾಂಕ: 10-03-2015.
2. ಭಾರತ ಸರ್ಕಾರದ ವಿತ್ತ ಮಂತ್ರಾಲಯದ (ವೆಚ್ಚ ವಿಭಾಗ)ಯವರ ಮಾರ್ಗಸೂಚಿ ಸಂಖ್ಯೆ: 13(32) ಎಫ್‌ಎಫ್‌ಸಿ/ಎಫ್‌ಸಿಡಿ/2015-16, ದಿನಾಂಕ:08-10-2015.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ದಿನಾಂಕ:20-11-2018 ರಂದು ನಡೆದ ಸಭೆಯ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಸರ್ಕಾರದ ಆದೇಶದಲ್ಲಿ 13ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನ ಹಾಗೂ ಸಾಮಾನ್ಯ ನಿರ್ವಹಣಾ ಅನುದಾನದ ಮೊತ್ತದಲ್ಲಿ, ಶೇ.25ರಷ್ಟು ಮೊತ್ತವನ್ನು ಪ್ರತಿ ಗ್ರಾಮ ಪಂಚಾಯತಿಗಳ ಬೀದಿದೀಪಗಳ ಮತ್ತು ಕುಡಿಯುವ ನೀರಿನ ಸ್ಥಾವರಗಳ ಚಾಲ್ತಿ ತಿಂಗಳುಗಳ ವಿದ್ಯುತ್ ಬಿಲ್ಲನ್ನು ಪಾವತಿಸಲು ಅನುವಾಗುವಂತೆ ಪ್ರತ್ಯೇಕವಾಗಿ ತೆರೆಯಲಾಗಿರುವ ESCROW ಖಾತೆಗಳಿಗೆ ಬಿಡುಗಡೆ ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ(2)ರ ಕೇಂದ್ರ ವಿತ್ತ ಸಚಿವಾಲಯದ ಮಾರ್ಗಸೂಚಿಯನ್ವಯ ಗ್ರಾಮ ಪಂಚಾಯತಿಗಳಿಗೆ ಅನುದಾನವನ್ನು ನೇರವಾಗಿ ಬಿಡುಗಡೆ ಮಾಡಬೇಕಾಗಿರುತ್ತದೆಯೇ ಹೊರತು, ಮೂಲದಲ್ಲಿ ಅನುದಾನವನ್ನು ಹಂಚಿಕೆ ಮಾಡುವ ವ್ಯವಸ್ಥೆಯು ಸೂಕ್ತವಾಗಿರುವುದಿಲ್ಲ ಹಾಗೂ ಕೇಂದ್ರ ಹಣಕಾಸು ಆಯೋಗದ ಅನುದಾನವನ್ನು ಬಿಡುಗಡೆ ಮಾಡಲು ಮತ್ತು ವೆಚ್ಚ ಮಾಡಲು 2018-19ನೇ ಸಾಲಿನಿಂದ PFMS & PRIASoft ತಂತ್ರಾಂಶವನ್ನು ಬಳಕೆ ಮಾಡಲಾಗುತ್ತಿದ್ದು, ಸದರಿ ತಂತ್ರಾಂಶಗಳಲ್ಲಿ ಪ್ರತಿ ಗ್ರಾಮ ಪಂಚಾಯಿತಿಯಿಂದ ಒಂದು ಬ್ಯಾಂಕ್ ಖಾತೆಯನ್ನು ಮಾತ್ರ ನಿರ್ವಹಿಸಲು ಅವಕಾಶವಿರುತ್ತದೆ.

ಈ ಕಾರಣದಿಂದ ಹಾಗೂ ESCROW ಪಾವತಿಯನ್ನು ಪ್ರತ್ಯೇಕ ಘಟಕವನ್ನಾಗಿ ಪರಿಗಣಿಸಲು ಹಾಗೂ ನಿರ್ವಹಿಸಲು ಸಾಧ್ಯವಿಲ್ಲದಿರುವುದನ್ನು ಪರಿಗಣಿಸಿ, ಮೇಲೆ ಓದಲಾದ (3)ರಲ್ಲಿನ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಲಾಗಿದೆ.

- ಪ್ರಸ್ತುತ 14ನೇ ಹಣಕಾಸು ಆಯೋಗ ಅನುದಾವನ್ನು 75:25 ಅನುಪಾತದಲ್ಲಿ ಬಿಡುಗಡೆಗೆ ಅನುಸರಿಸುತ್ತಿರುವ ಕಾರ್ಯವಿಧಾನವನ್ನು ಕೈಬಿಡುವುದು.
- ಇನ್ನು ಮುಂದೆ 14ನೇ ಹಣಕಾಸಿನ ಅಯೋಗದ ಅನುದಾನದ ಎಲ್ಲಾ ಕಂತುಗಳನ್ನು ಶೇ. 100 ರಷ್ಟು ಅನುದಾನವನ್ನು ಗ್ರಾಮ ಪಂಚಾಯಿತಿಗಳ 14ನೇ ಹಣಕಾಸು ಆಯೋಗದ ಖಾತೆಗಳಿಗೆ ಬಿಡುಗಡೆ ಮಾಡುವುದು.
- ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾದ ಶೇ. 100 ರಷ್ಟು ಅನುದಾನದಲ್ಲಿ ಶೇ. 25 ರಷ್ಟು ಅನುದಾವನ್ನು ಗ್ರಾಮ ಪಂಚಾಯಿತಿಗಳಿಂದ ವಿದ್ಯುತ್ ಮಂಡಳಿಗೆ PFMS ಮೂಲಕ ಪಾವತಿ ಮಾಡುವುದು.
- ಗ್ರಾಮ ಪಂಚಾಯತ್‌ಗಳಿಂದ ವಿದ್ಯತ್ ಮಂಡಳಿಗೆ ವಿದ್ಯುತ್ ವೆಚ್ಚವನ್ನು PFMS ಮೂಲಕ ಪಾವತಿ ಮಾಡಲು ಗ್ರಾಮ ಪಂಚಾಯಿತಿಯ PRIASoft ತಂತ್ರಾಂಶದಲ್ಲಿ ಕಡ್ಡಾಯವಾಗಿ ವಿದ್ಯುತ್ ಮಂಡಳಿಯನ್ನು Vendor ಗಳನ್ನಾಗಿ ನೋಂದಣಿ ಮಾಡುವುದು.

ಈ ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 14ನೇ ಹಣಕಾಸು ಆಯೋಗದ ಅನುದಾನವನ್ನು ಮೂಲದಲ್ಲಿ ESCROW ಖಾತೆಗೆ ವಿಂಗಡಿಸುವ ಬದಲಾಗಿ, ಪೂರ್ಣ ಅನುದಾನವನ್ನು ನೇರವಾಗಿ ಗ್ರಾಮ

ಪಂಚಾಯತಿ ಖಾತೆಗೆ ಬಿಡುಗಡೆ ಮಾಡಲು ಹಾಗೂ ಮೇಲೆ ಓದಲಾದ(1)ರ ಸರ್ಕಾರದ ಆದೇಶವನ್ನು ಸೂಕ್ತವಾಗಿ ಮಾರ್ಪಡಿಸಲು ಸರ್ಕಾರ ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಗ್ರಾಪಸ 2019, ದಿನಾಂಕ: 21-01-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರದ 14ನೇ ಹಣಕಾಸು ಆಯೋಗದಡಿ ಅನುದಾನವನ್ನು ಸಂಪೂರ್ಣ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯತಿ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ನಿರ್ಧರಿಸಿದೆ. ಹಾಗೂ ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಈ ಹಿಂದೆ ಜಾರಿಯಲ್ಲಿದ್ದ ಮೂಲದಲ್ಲಿ ESCROW ಖಾತೆಗೆ ವಿಂಗಡಿಸಿ, ಗ್ರಾಮ ಪಂಚಾಯತಿಗಳ ESCROW ಖಾತೆಯ ಮುಖಾಂತರ ವಿದ್ಯುತ್ ಬಿಲ್ಲುಗಳ ವೆಚ್ಚಕ್ಕಾಗಿ ಬಿಡುಗಡೆಗೊಳಿಸುವ ಪ್ರಕ್ರಿಯೆಯನ್ನು ರದ್ದುಗೊಳಿಸಲಾಗಿದೆ. ಗ್ರಾಮ ಪಂಚಾಯಿತಿಯಿಂದ ಬಾಕಿ ಇರುವ ವಿದ್ಯುಚ್ಛಕ್ತಿ ಬಿಲ್ಲನ್ನು ಬಾಕಿ ಉಳಿಸಿಕೊಳ್ಳದೇ ಸಂಬಂಧಪಟ್ಟ ಸಂಸ್ಥೆಗಳಿಗೆ ಪಾವತಿಸತಕ್ಕದ್ದು. ಹಾಗೂ ಪ್ರಸ್ತಾವನೆಯಲ್ಲಿ ವಿವರಿಸಿರುವ ಷರತ್ತುಗಳನ್ನು ಗ್ರಾಮ ಪಂಚಾಯಿಗಳು ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ವಿ.ವೆಂಕಟೇಶ್)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು. ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಿದೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), (ಇ ಅಂಡ್ ಆರ್ ಎಸ್ ಎ) ಮತ್ತು (ಎ ಅಂಡ್ ಇ), ಸಿ ಬ್ಲಾಕ್, ಹೊಸ ಕಟ್ಟಡ ಪಿ.ಬಿ. ನಂ.5398, ಕರ್ನಾಟಕ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳುಹಿಸುತ್ತಾ, ಸದರಿ ಅನುದಾನದ ಸಮರ್ಪಕ ಬಳಕೆ ಬಗ್ಗೆ ಸೂಕ್ತ ಮೇಲ್ವಿಚಾರಣೆ ನಡೆಸುವ ವ್ಯವಸ್ಥೆ ಕಲ್ಪಿಸಲು ತಿಳಿಸಿದೆ.
3. ರಾಜ್ಯದ ಮುಖ್ಯ ಲೆಕ್ಕಾಧಿಕಾರಿಗಳಿಗೆ/ಮುಖ್ಯ ಯೋಜನಾಧಿಕಾರಿಗಳಿಗೆ ಕಳುಹಿಸಿದೆ.
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಸದರಿ ಅನುದಾನವನ್ನು ನಿಯಮಾನುಸಾರ ಬಳಕೆ ಮಾಡಲು ತಿಳಿಸಿದೆ.
5. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪ ನಿರ್ದೇಶಕರು, ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಕರ್ನಾಟಕ ವಿಕಾಸ/ ವೆಬ್‌ಸೈಟ್.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ&ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ನಿರ್ದೇಶಕರು (ಪಂ.ರಾಜ್-1&2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.